ಕರ್ನಾಟಕ ಸರ್ಕಾರ

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು

*****************************************************************************

ಸಂಖ್ಯೆ : ಸಿ.ಎಸ್1/ಗಣಕಶಾಖೆ/ಎಸ್.ಎಸ್.ಎಲ್.ಸಿ.ಮೌ.ನೋ.ಅಪ್/01/2021-22 ದಿನಾಂಕ: 21-02-2022

## - ಸುತ್ತೋಲೆ -

ವಿಷಯ : 2022ರ ಎಸ್.ಎಸ್.ಎಲ್.ಸಿ. ಮುಖ್ಯ ಪರೀಕ್ಷೆಯ ಮೌಲ್ಯಮಾಪನ ಕಾರ್ಯಕ್ಕಾಗಿ ಪ್ರೌಢಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಮಾಹಿತಿಯನ್ನು ಆನ್‌ಲೈನ್‌ನಲ್ಲಿ ನೋಂದಣಿ/ಅಪ್‌ಡೇಟ್ ಮಾಡುವ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

*****

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ನಡೆಯಲಿರುವ 2022ರ ಎಸ್.ಎಸ್.ಎಲ್.ಸಿ ಮುಖ್ಯ ಪರೀಕ್ಷಾ ಮೌಲ್ಯಮಾಪನ ಕಾರ್ಯಕ್ಕಾಗಿ ರಾಜ್ಯದ ಎಲ್ಲಾ ಸರ್ಕಾರಿ, ಮಾನ್ಯತೆ ಪಡೆದಿರುವ ಅನುದಾನಿತ ಮತ್ತು ಅನುದಾನರಹಿತ ಶಾಲೆಗಳ ಮುಖ್ಯ ಶಿಕ್ಷಕರು ತಮ್ಮ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮುಖ್ಯ ಶಿಕ್ಷಕರು ಮತ್ತು ಸಹ ಶಿಕ್ಷಕರ ವಿವರಗಳನ್ನು ಶಾಲಾ ಲಾಗಿನ್‌ನಲ್ಲಿ ಆನ್‌ಲೈನ್ ಮೂಲಕ ನೋಂದಾಯಿಸಲು ದಿನಾಂಕ: 15-02-2022 ರಿಂದ ಅವಕಾಶ ಕಲ್ಪಿಸಲಾಗಿದ್ದು, ಅಂತಿಮ ದಿನಾಂಕ: 22-02-2022ರವರೆಗೆ ನಿಗದಿಗೊಳಿಸಲಾಗಿತ್ತು. ಅದರಂತೆ ಈ ಆನ್‌ಲೈನ್ ನೋಂದಣಿ ಕಾರ್ಯ ಪ್ರಗತಿಯಲ್ಲಿದೆ.

ಆದಾಗ್ಯೂ, ಮೌಲ್ಯಮಾಪಕರ ವಿವರಗಳನ್ನು Update ಮಾಡಿ Freeze ಮಾಡಲು **ದಿನಾಂಕ: 27-02-2022** ರವರೆಗೆ ಅವಧಿ ವಿಸ್ತರಿಸಿ ಅವಕಾಶ ಕಲ್ಪಿಸಲಾಗಿದ್ದು, ಎಲ್ಲಾ ಶಾಲೆಗಳ ಮುಖ್ಯಸ್ಥರು ನೋಂದಣಿ ಪ್ರಕ್ರಿಯೆಯನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಲು ಸೂಚಿಸಿದೆ.

(ಗೋಪಾಲಕೃಷ್ಣ ಹೆಚ್.ಎನ್.)
ನಿರ್ದೇಶಕರು, (ಪರೀಕ್ಷೆಗಳು)

**ಅಗತ್ಯ ಕ್ರಮಕ್ಕಾಗಿ :**

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ರವರು ತಮ್ಮ ಜಿಲ್ಲೆಯ ಎಲ್ಲಾ ಶಾಲೆಗಳು ಮೌಲ್ಯಮಾಪನ ಕಾರ್ಯಕ್ಕೆ ನೋಂದಾಯಿಸಲು ಕ್ರಮವಹಿಸುವುದು.
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ
3. ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗು ಮಾನ್ಯತೆ ಪಡೆದಿರುವ ಖಾಸಗಿ ಅನುದಾನರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ